**1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂಃ ರವರ ನ್ಯಾಯಾಲಯ, ಮೂಡಿಗೆರೆ**

**ಸಿ.ಸಿ.536/2024**

| | | |
|---|---|---|
| ಸಾಕ್ಷಿದಾರರ ಹೆಸರು | : ಸಚಿನ್ | ಪ್ರಾಸಾ-8 |
| ತಂದೆಯ ಹೆಸರು | : ಗೋಪಾಲ್ | ಚಾಸಾ-10 |
| ವಯಸ್ಸು | : 36 ವರ್ಷ | ಪ್ರಮಾಣ ವಚನ ಬೋಧಿಸಲಾದ |
| ಉದ್ಯೋಗ | : ವ್ಯವಸಾಯ | ದಿನಾಂಕಃ 20.02.2026. |
| ವಾಸಸ್ಥಳ | : ಪಲ್ಗುಣಿ | |

**:ಮುಖ್ಯ ವಿಚಾರಣೆ ಪ್ರಾಜ್ಞ್ಯಾ ಸ.ಸ.ಅ. ರವರಿಂದ:**

ನ್ಯಾಯಾಲಯದ ಮುಂದಿರುವ ಆರೋಪಿಯ ಪರಿಚಯ ನನಗಿಲ್ಲ. ಚಾಸಾ-9 ರವರ ಪರಿಚಯ ನನಗಿದೆ.

ಸಾಕ್ಷಿಯು ನಿಪಿ-10 ಮತ್ತು 11 ರ ಮಹಜರ್ ನಲ್ಲಿ ತಮ್ಮ ಸಹಿಯನ್ನು ಗುರುತಿಸಿದ್ದು, ಸದರಿ ಸಹಿಯನ್ನು ನಿಪಿ-10(ಬಿ) ಮತ್ತು 11(ಬಿ) ಎಂದು ಗುರುತಿಸಲಾಯಿತು. ಸಾಕ್ಷಿಯು ನಿಪಿ-12 ಮತ್ತು 13 ರ ಪೋಟೋದಲ್ಲಿ ತಮ್ಮ ಇರುವಿಕೆಯ ಬಗ್ಗೆ ಗುರುತಿಸುತ್ತಾರೆ.

ಕಳೆದ 2 ವರ್ಷದ ಹಿಂದೆ ನಾನು ಮೂಡಿಗೆರೆಯ ಪ್ರಕಾಶ್ ಎಂಬುವವರ ಅಂಗಡಿಯಲ್ಲಿ ನಿಪಿ-10 ಕ್ಕೆ ಸಹಿ ಮಾಡಿರುತ್ತೇನೆ. ನ್ಯಾಯಾಲಯದ ಮುಂದಿರುವ ಆರೋಪಿಯು ಸದರಿಯವರ ಅಂಗಡಿಯಲ್ಲಿ ಕಳ್ಳತನ ಮಾಡಿರುವ ಸಲುವಾಗಿ ಸಹಿಯನ್ನು ಮಾಡಲು ತಿಳಿಸಿದ ಮೇರೆಗೆ ನಿಪಿ-10 ಕ್ಕೆ ಪೋಲಿಸರ ಕೋರಿಕೆಯ ಮೇರೆಗೆ ಮಾಡಿರುತ್ತೇನೆ. ಸದರಿ ಸ್ಥಳದಲ್ಲಿ ನಾನು ಯಾವುದೇ ವಸ್ತುಗಳನ್ನು ನೋಡಿರುವುದಿಲ್ಲ. ನಿಪಿ-10 ರಲ್ಲಿ ಚಿನ್ನದ ಸರ ಕಳುವಾಗಿರುವ ಬಗ್ಗೆ ಬರೆಯಲಾಗಿರುತ್ತದೆ. ನಿಪಿ-12 ಮತ್ತು 13 ನ್ನು ಅಂಗಡಿಯಲ್ಲಿಯೇ ತೆಗೆಯಲಾಗಿರುತ್ತದೆ. ಇದನ್ನು ಹೊರತುಪಡಿಸಿ ನನಗೆ ಇನ್ಯಾವುದೇ ಮಾಹಿತಿ ಇರುವುದಿಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪ್ರಾಜ್ಞ್ಯಾ ಸ.ಅ.ಅ. ರವರು ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು ಅನುಮತಿ ನೀಡಿದೆ)

**ಪಾಟೀ ಸವಾಲು: ಪ್ರಾಜ್ಞ್ಯಾ ಸ.ಸ.ಅ. ರವರಿಂದ:**

ನಿಪಿ-10 ಮತ್ತು 11 ಕ್ಕೆ ದಿ.26.02.2024 ರಂದು ಮೂಡಿಗೆರೆಯ ನವರತ್ನ ಫೈನಾನ್ಸ್ ನ ಬಳಿ ಸಹಿ ಮಾಡಿರುತ್ತೇನೆ ಎಂದರೆ ಸರಿ. ಸದರಿ ಸಮಯದಲ್ಲಿ ಆರೋಪಿಯು ತಾನು ಕಳ್ಳತನ ಮಾಡಿರುವ ಚಿನ್ನದ ಸರವನ್ನು ನವರತ್ನ ಫೈನಾನ್ಸ್ ಅಂಗಡಿಯಲ್ಲಿ ಅಡವಿಟ್ಟಿರುವ ಬಗ್ಗೆ ತಿಳಿಸಿದ ಮೇರೆಗೆ ನಿಪಿ-10 ನ್ನು ಬರವಣಿಗೆ ಮಾಡಿರುತ್ತಾರೆ ಎಂದರೆ ಸರಿಯಲ್ಲ. ಆರೋಪಿಯು ತೋರಿಸಿದ ಸರವನ್ನು ಅಮಾನತುಪಡಿಸಿಕೊಂಡು ಪೋಲಿಸರು ನಿಪಿ-10 ರಂತೆ ಮಹಜರ್ ಕ್ರಮ

ಜರುಗಿಸಿರುತ್ತಾರೆ ಎಂದರೆ ಸರಿಯಲ್ಲ. ಸದರಿ ಸಮಯದಲ್ಲಿ ನಿಪಿ-12 ಮತ್ತು 13 ರಂತೆ ಫೋಟೋವನ್ನು ತೆಗೆದಿರುತ್ತಾರೆ ಎಂದರೆ ಸರಿ.

ನಿಪಿ-10 ಮತ್ತು 11 ರಲ್ಲಿ ಬರೆದಿರುವ ವಿಷಯ ನನಗೆ ತಿಳಿದಿದ್ದರೂ ಆರೋಪಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**<u>ಪಾಟೀ ಸವಾಲು: ಆರೋಪಿ ಪರ ಶ್ರೀ ಎಂ.ಎಂ.ಆರ್. ವಕೀಲರಿಂದಃ</u>**

ನಿಪಿ-10 ರಲ್ಲಿ ಏನು ಬರೆಯಲಾಗಿದೆ ಎಂದು ಸಹಿ ಪಡೆದ ನಂತರ ಪೋಲಿಸರು ನನಗೆ ಓದಿ ತಿಳಿಸಿರುವುದಿಲ್ಲ ಎಂದರೆ ಸರಿ. ನಾನು ನಿಪಿ-10 ನ್ನು ಓದಿ ನೋಡಿರುವುದಿಲ್ಲ. ನಿಪಿ-12 ಮತ್ತು 13 ನ್ನು ಯಾವ ವಿಷಯದ ಕುರಿತಾಗಿ ತೆಗೆದಿರುತ್ತಾರೆ ಎಂದು ನನಗೆ ಮಾಹಿತಿ ಇರುವುದಿಲ್ಲ ಎಂದರೆ ಸರಿ. ನಿಪಿ-10 ಮತ್ತು 11 ಕಲ್ಕೆ ಪೋಲಿಸರು ಕೋರಿಕೆಯ ಮೇರೆಗೆ ಸಹಿ ಮಾಡಿರುತ್ತೇನೆ ಎಂದರೆ ಸರಿ. ನನಗೆ ಪ್ರಕರಣದ ಬಗ್ಗೆ ಯಾವುದೇ ಮಾಹಿತಿ ಇರುವುದಿಲ್ಲ ಎಂದರೆ ಸರಿ.

**<u>ಮರು ವಿಚಾರಣೆ ಇಲ್ಲ</u>**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿ ಮುದ್ರಿಸಲಾಯಿತು)

ಓ ಹೇ ಕೇ ಸ ಇ ಎ ಒ.,

ಸಹಿ/-

ಸಾಕ್ಷಿ ಸಹಿಃ

1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರದನ್ಯಾದಂ., ಮೂಡಿಗೆರೆ.